ಆ) ಹಾಗಿದ್ದಲ್ಲಿ ಈ ಲೋಪ ದೋಷಗಳನ್ನು ಸರಿಪಡಿಸಲು ಸರ್ಕಾರವು ಏನು ಕ್ರಮ ಕೈಗೊಂಡಿದೆ?

ಶ್ರೀ ಹೆಚ್.ಎಸ್. ಮಹದೇವಪ್ರಸಾದ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಇಲ್ಲ. ಅನರ್ಹರು ಬಿಪಿಎಲ್ ಕಾರ್ಡ್ ಹೊಂದಿರುವುದನ್ನು ಗುರುತಿಸಿ ಅಂತಹವರ ಕಾರ್ಡುಗಳನ್ನು ಮಾತ್ರ ರದ್ದುಪಡಿಸಲಾಗಿದೆ. ಅರ್ಹ ಫಲಾನುಭವಿಗಳು ಕೈಬಿಟ್ಟು ಹೋಗಿವೆ. ಅನರ್ಹ ಕುಟುಂಬಗಳ ಪಟ್ಟಿ ಸೇರ್ಪಡೆಯಾಗಿದೆಯೆಂದು ಸರ್ಕಾರದ ಗಮನಕ್ಕೆ ಬಂದಿದ್ದರ ಕಾರಣ, ರಾಜ್ಯ ಮಟ್ಟದಲ್ಲಿ ಕಂದಾಯ / ನಗರಾಭಿವೃದ್ಧಿ/ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಸನ್ಮಾನ್ಯ ಸಚಿವರುಗಳನ್ನು ಒಳಗೊಂಡ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಸಮಾಲೋಚಿಸಿ, ಕಂದಾಯ ವಿಭಾಗ ಮಟ್ಟದಲ್ಲಿ ಅಧಿಕಾರಿಗಳ ಸಭೆಯನ್ನು ಜರುಗಿಸಿ, ತಿಳುವಳಿಕೆ ಕೊಡುವುದರೊಂದಿಗೆ ಮನೆ ಮನೆ ಪುನರ್ ಸಮೀಕ್ಷೆ ಕಾರ್ಯ ಮಾಡಲು ಸರ್ಕಾರಿ ಆದೇಶ ಸಂಖ್ಯೆ: ಅನಾಸ 114 ಡಿಆರ್ಎ 2004, ದಿನಾಂಕ 10-1-2005ರಂದು ಆದೇಶ ಹೊರಡಿಸಿದೆ. ಈ ಆದೇಶದಂತೆ ಪುನರ್ ಸಮೀಕ್ಷೆ ಕಾರ್ಯ ಪ್ರಾರಂಭವಾಗಿದ್ದು, ಸಮೀಕ್ಷೆ ಫಲಿತಾಂಶವನ್ನು ಗ್ರಾಮ / ವಾರ್ಡ್ ಸಭೆಗಳಲ್ಲಿಟ್ಟು ಅನುಮೋದನೆ ಪಡೆಯುವ ನಿರೀಕ್ಷೆ ಏಪ್ರಿಲ್, 2005ನಲ್ಲಿರುತ್ತದೆ. ಬೇಡಿಕೆ ಎಷ್ಟು ಎಂದು ನಿರ್ಧರಿಸಿದ ಮೇಲೆ ಅರ್ಹರಿಗೆ ಹಳದಿ ಪಡಿತರ ಚೀಟಿ ವಿತರಿಸಲಾಗುವುದು.

636(949) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸತತ 3 ವರ್ಷಗಳ ಬರಗಾಲದ ಹಿನ್ನೆಲೆಯಲ್ಲಿ ರೈತರ ಸಹಕಾರಿ ಸಾಲದ ಮೇಲಿನ ಬಡ್ಡಿ ಮನ್ನಾ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ರಾಜ್ಯದಲ್ಲಿನ ರೈತರ ಸಹಕಾರ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವ ಪ್ರಸ್ತಾವ ಸರ್ಕಾರದ ಮುಂದೆ ಪರಿಶೀಲನೆಯಲ್ಲಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

637(154) ಶ್ರೀ ಸುನೀಲ್ ಕುಮಾರ್ (ಕಾರ್ಕಳ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಂಗವಿಕಲರಿಗೆ ಹಾಗೂ ಅರ್ಹ ವಿಧವೆಯರಿಗೆ ನೀಡುತ್ತಿರುವ ಮಾಸಿಕ ಭತ್ಯೆ ಎಷ್ಟು; (ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)